# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮ ವಿಕಾಸ ಯೋಜನೆಯಲ್ಲಿ ಹೆಚ್ಚುವರಿಯಾಗಿ ಸೇರ್ಪಡೆಗೊಂಡಿರುವ ಗ್ರಾಮಗಳ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ 2017-18ನೇ ಸಾಲಿನ 1ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:145:ಎಫ್ಎನ್:2016 ದಿ:01.04.2017.
2. ಆರ್ಥಿಕ ಇಲಾಖೆಯ ಅಟಿ ಸಂಖ್ಯೆ:ಆಇ:79:ವೆಚ್ಚ – 6/2017 ದಿ:01.04.2017
3. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:23:ಸುಗ್ರಾಯೋ:2015, ದಿ:13.01.2016.
4. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:23:ಸುಗ್ರಾಯೋ:2015, ದಿ:27.02.2016.
5. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:17:ಸುಗ್ರಾಯೋ:2016, ದಿ:16.05.2016.
6. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:17:ಸುಗ್ರಾಯೋ:2016, ದಿ:08.12.2016.
7. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:17:ಸುಗ್ರಾಯೋ:2016, ದಿ:03.03.2017.
8. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:01:ಗ್ರಾವಿಯೋ:2015, ದಿ:14.12.2016.
9. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:08:ಗ್ರಾವಿಯೋ:2017, ದಿ:25.03.2017.
10. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:08:ಗ್ರಾವಿಯೋ:2017, ದಿ:06.05.2017.

***

**ಪ್ರಸ್ತಾವನೆ:**

2017-18ನೇ ಸಾಲಿನಲ್ಲಿ ಆಯವ್ಯಯದಲ್ಲಿ ಪ್ರಗತಿಯಲ್ಲಿರುವ ಸುವರ್ಣ ಗ್ರಾಮೋದಯ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಹಾಗೂ 2014-15ನೇ ಸಾಲಿನಿಂದ ಆರಂಭವಾಗಿರುವ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಓದಲಾದ (1) ರಲ್ಲಿ ರೂ.516.00 ಕೋಟಿಗಳನ್ನು ಅನುದಾನವನ್ನು ಒದಗಿಸಿ, ಈ ಕೆಳಕಂಡಂತೆ ಹಂಚಿಕೆ ಮಾಡಲಾಗಿದೆ

1. 4215-02-800-0-02-132 (ಯೋಜನೆ) ಬಂಡವಾಳ ವೆಚ್ಚಗಳು - ರೂ. 296.96 ಕೋಟಿಗಳು
2. 4215-02-800-0-02-422 (ಯೋಜನೆ) ವಿಶೇಷ ಘಟಕ ಯೋಜನೆ – ರೂ. 148.95 ಕೋಟಿಗಳು
3. 4215-02-800-0-02-423 (ಯೋಜನೆ) ಗಿರಿಜನ ಉಪ ಯೋಜನೆ – ರೂ. 70.09 ಕೋಟಿಗಳು

**ಒಟ್ಟು – ರೂ. 516.00 ಕೋಟಿಗಳು**

ಓದಲಾದ (2) ರಂತೆ ಬೆಂಗಳೂರಿನ ಎಂ.ಜಿ.ಆರ್.ಐ.ಡಿ ಆವರಣದಲ್ಲಿ ಮಾದರಿ ಪಾರಂಪರಿಕ ಗ್ರಾಮವೊಂದನ್ನು ಸ್ಥಾಪಿಸಲು ರೂ.3.00 ಕೋಟಿಗಳನ್ನು ಮೀಸಲಿರಿಸಿದೆ.

ರಾಜ್ಯದ 189 ಗ್ರಾಮೀಣ ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಆಯ್ಕೆಗೊಂಡ 939 ಗ್ರಾಮಗಳಿಗೆ ಒಟ್ಟು ರೂ.750.00 ಕೋಟಿಗಳ ಅಂದಾಜಿನಲ್ಲಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನ ಮಾಡಲಾಗಿದೆ.

ಓದಲಾದ (3), (4), (5) (6)ಮತ್ತು (7) ರಲ್ಲಿ 189 ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳಲ್ಲಿ ಆಯ್ಕೆಯಾದ ಗ್ರಾಮಗಳಿಗೆ 2015-16 & 2016-17ನೇ ಸಾಲಿನಲ್ಲಿ ಈವರೆಗೆ ಒಟ್ಟು ರೂ. 586.59 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಓದಲಾದ (7) ರಲ್ಲಿ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನ ಸಭಾ ಕ್ಷೇತ್ರದ 3 ಗ್ರಾಮಗಳಾದ ನಾಗಸಮುದ್ರ, ರಾಂಪುರ ಮತ್ತು ಬೊಮ್ಮದೇವರಹಳ್ಳಿ ಗ್ರಾಮಗಳನ್ನು ಮತ್ತು ಓದಲಾದ (8) ರಲ್ಲಿ ಹಾವೇರಿ ಜಿಲ್ಲೆ ರಾಣೆಬೆನ್ನೂರು ವಿಧಾನ ಸಭಾ ಕ್ಷೇತ್ರದ ಕಾಕೋಳ ಗ್ರಾಮ ಹಾಗೂ ಓದಲಾದ (9) ರಂತೆ ಮೈಸೂರು ಜಿಲ್ಲೆ ಕೆ.ಆರ್ ನಗರ ವಿಧಾನ ಸಭಾ ಕ್ಷೇತ್ರದ ಬ್ಯಾಡರಹಳ್ಳಿ ಮತ್ತು ಸಿದ್ದನಕೊಪ್ಪಲು ಗ್ರಾಮಗಳು ಸೇರಿದಂತೆ ಒಟ್ಟಾರೆ 6 ಗ್ರಾಮಗಳನ್ನು ಗ್ರಾಮ ವಿಕಾಸ ಯೋಜನೆಯಡಿ ಹೆಚ್ಚುವರಿಯಾಗಿ ಸೇರ್ಪಡೆಗೊಳಿಸಿ ತಲಾ ಗ್ರಾಮಗಳಿಗೆ ರೂ.75.00 ಲಕ್ಷಗಳ ಅನುದಾನ ನಿಗಧಿಪಡಿಸಿ ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ.

ಗ್ರಾಮ ವಿಕಾಸ ಯೋಜನೆಯಡಿ ಹೆಚ್ಚುವರಿಯಾಗಿ ಸೇರ್ಪಡೆಗೊಳಿಸಲಾಗಿರುವ ಮೇಲ್ಕಂಡ 6 ಗ್ರಾಮಗಳಿಗೆ ಕಾಮಗಾರಿಗಳ ಅನುಷ್ಠಾನಕ್ಕಾಗಿ 2017-18ನೇ ಸಾಲಿನಲ್ಲಿ ತಲಾ ಗ್ರಾಮಗಳಿಗೆ ರೂ.37.50 ಲಕ್ಷಗಳಂತೆ ಒಟ್ಟಾರೆ ಮೊದಲನೇ ಕಂತಿನ ಅನುದಾನ ರೂ. 225.00 ಲಕ್ಷಗಳನ್ನು (ರೂಪಾಯಿ ಎರಡು ನೂರು ಇಪ್ಪತ್ತೈದು ಲಕ್ಷಗಳು ಮಾತ್ರ) ಬಿಡುಗಡೆ ಮಾಡಬೇಕಾಗಿರುತ್ತದೆ.

ಪ್ರಯುಕ್ತ ಈ ಆದೇಶ,

**ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:11:ಗ್ರಾವಿಯೋ:2017, ಬೆಂಗಳೂರು,**
**ದಿನಾಂಕ : 17.05.2017.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನ ಸಭಾ ಕ್ಷೇತ್ರದ 3 ಗ್ರಾಮಗಳಾದ ನಾಗಸಮುದ್ರ, ರಾಂಪುರ ಮತ್ತು ಬೊಮ್ಮದೇವರಹಳ್ಳಿ ಗ್ರಾಮಗಳನ್ನು ಮತ್ತು ಹಾವೇರಿ ಜಿಲ್ಲೆ ರಾಣೆಬೆನ್ನೂರು ವಿಧಾನ ಸಭಾ ಕ್ಷೇತ್ರದ ಕಾಕೋಳ ಗ್ರಾಮ ಹಾಗೂ ~~ಕಾಕೋ~~ ಮೈಸೂರು ಜಿಲ್ಲೆ ಕೆ.ಆರ್ ನಗರ ವಿಧಾನ ಸಭಾ ಕ್ಷೇತ್ರದ ಬ್ಯಾಡರಹಳ್ಳಿ ಮತ್ತು ಸಿದ್ದನಕೊಪ್ಪಲು ಗ್ರಾಮಗಳು ಸೇರಿದಂತೆ ಒಟ್ಟಾರೆ 6 ಗ್ರಾಮಗಳಲ್ಲಿ ಗ್ರಾಮ ವಿಕಾಸ ಯೋಜನೆ ಅನುಷ್ಠಾನಕ್ಕಾಗಿ 2017-18ನೇ ಸಾಲಿನಲ್ಲಿ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ **ಒಟ್ಟು ರೂ. 225.00.ಲಕ್ಷಗಳು (ರೂಪಾಯಿ ಎರಡು ನೂರು ಇಪ್ಪತ್ತೈದು ಲಕ್ಷಗಳು ಮಾತ್ರ)** ಅನುದಾನವನ್ನು ಅನುಬಂಧದಲ್ಲಿ ವಿವರಿಸಿದಂತೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನವನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ಭರಿಸತಕ್ಕದ್ದು.

1. 4215-02-800-0-02-132 (ಯೋಜನೆ) ಬಂಡವಾಳ ವೆಚ್ಚಗಳು - ರೂ. 128.25 ಲಕ್ಷಗಳು
2. 4215-02-800-0-02-422(ಯೋಜನೆ) ವಿಶೇಷ ಘಟಕ ಯೋಜನೆ- ರೂ. 65.25 ಲಕ್ಷಗಳು
3. 4215-02-800-0-02-423(ಯೋಜನೆ) ಗಿರಿಜನ ಉಪಯೋಜನೆ - ರೂ. 31.50 ಲಕ್ಷಗಳು

<u>ಒಟ್ಟು -ರೂ. 225.00</u> ಲಕ್ಷಗಳು

**ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆ ಮಾಡಿದ ಗ್ರಾಮಗಳ ಅನುಮೋದಿತ ಗ್ರಾಮಾಭಿವೃದ್ಧಿ ಯೋಜನೆಯ ಕಾಮಗಾರಿಗಳ ಅನುಷ್ಠಾನಕ್ಕಾಗಿ ಮಾತ್ರ ವಿನಿಯೋಗಿಸುವುದು.**

ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಒದಗಿಸಿರುವ ಅನುದಾನವನ್ನು ಜಿಲ್ಲೆಗಳಿಗೆ/ಗ್ರಾಮಗಳಿಗೆ ಹಂಚಿಕೆಯಾಗಿರುವ ಅನುದಾನದಲ್ಲಿ ಆಯಾ ಲೆಕ್ಕ ಶೀರ್ಷಿಕೆಯಡಿ ಕಡ್ಡಾಯವಾಗಿ ಭರಿಸತಕ್ಕದ್ದು.

ಈ ಅನುದಾನವನ್ನು ಓದಲಾದ (1) ರಲ್ಲಿ ನಿಗಧಿಪಡಿಸಿದಂತೆ ಈ ಆದೇಶವನ್ನು ಹೊರಡಿಸಲಾಗಿದೆ.

**ಷರತ್ತುಗಳು :**

1. ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆ ಮಾಡಿದ ಗ್ರಾಮಗಳಲ್ಲಿ ಮಾರ್ಗಸೂಚಿಯಲ್ಲಿ ಗ್ರಾಮ ವಿಕಾಸ ಯೋಜನೆಯ ಅನುದಾನದಲ್ಲಿ ತೆಗೆದುಕೊಳ್ಳ ಬೇಕಾದ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರಲು ಮಾತ್ರ ಅನುದಾನವನ್ನು ವಿನಿಯೋಗಿಸುವುದು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರು ಈ ಅನುದಾನ ಬಿಡುಗಡೆ ಆದೇಶವನ್ನು ಪಡೆದ ಕೂಡಲೇ ಅನುದಾನವನ್ನು ಖಜಾನೆಯಿಂದ ಸೆಳೆದು ತಕ್ಷಣವೇ ಗ್ರಾಮ ಪಂಚಾಯತಿಗಳಲ್ಲಿ ತೆರೆಯಲಾದ ಗ್ರಾಮ ವಿಕಾಸ ಯೋಜನೆಯ ಪ್ರತ್ಯೇಕ ಬ್ಯಾಂಕ್ ಖಾತೆಗೆ ವಿಳಂಬವಾಗದಂತೆ EFMS/RTGS ಮೂಲಕ ಅನುದಾನವನ್ನು ಒಂದು ವಾರದೊಳಗೆ ಕಡ್ಡಾಯವಾಗಿ ಜಮಾ ಮಾಡತಕ್ಕದ್ದು.

3. ಗ್ರಾಮ ವಿಕಾಸ ಯೋಜನೆಗೆ ಬಿಡುಗಡೆ ಮಾಡಿದ ಅನುದಾನವನ್ನು ಜಿಲ್ಲಾ ಪಂಚಾಯತಿಯ ಲೆಕ್ಕದಲ್ಲಿ ಉಳಿಸಿಕೊಳ್ಳದೆ ಕೂಡಲೇ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವುದು ಮತ್ತು ವ್ಯಪಗತವಾಗದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ವಹಿಸುವುದು.

4. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರು ಆರ್ಥಿಕ ಮತ್ತು ಭೌತಿಕ ಪ್ರಗತಿಯ ವರದಿಯನ್ನು ಪಂಚಾಯತಿ ಅಭಿವೃದ್ದಿ ಅಧಿಕಾರಿಗಳಿಂದ ವಿಧಾನ ಸಭಾ ಕ್ಷೇತ್ರವಾರು ಪಡೆದು ಕ್ರೋಢೀಕರಿಸಿ ವರದಿಯನ್ನು ಮತ್ತು ಉಪಯುಕ್ತತಾ ಪತ್ರವನ್ನು ಕೂಡಲೇ ಸರ್ಕಾರಕ್ಕೆ ಸಲ್ಲಿಸುವುದು.

5. ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮದಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಜನಾಂಗದವರು ಇಲ್ಲದಂತಹ ಸಂದರ್ಭದಲ್ಲಿ ಒಂದು ವಿಧಾನ ಸಭಾ ಕ್ಷೇತ್ರಕ್ಕೆ ನಿಗಧಿಪಡಿಸಿರುವ ರೂ.3.75 ಕೋಟಿಗಳ ಅನುದಾನದಲ್ಲಿ ಎಸ್.ಸಿ.ಪಿ. & ಟಿ.ಎಸ್.ಪಿ ಗೆ ನಿಗಧಿಪಡಿಸಿರುವ ಅನುದಾನವನ್ನು ಅದೇ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಆಯ್ಕೆ ಮಾಡಿರುವ ಹೆಚ್ಚು ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಜನಾಂಗದ ವಾಸಿಸುವ ಗ್ರಾಮಗಳಲ್ಲಿ ಅನುದಾನವನ್ನು ಬಳಸಿಕೊಳ್ಳುವುದು.

6. ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಜನರು ವಾಸಿಸುತ್ತಿಲ್ಲವೆಂಬ ಕಾರಣಕ್ಕಾಗಿ ಎಸ್.ಸಿ.ಪಿ. & ಟಿ.ಎಸ್.ಪಿ ಯೋಜನೆಗೆ ನಿಗಧಿಪಡಿಸಿರುವ ಅನುದಾನವನ್ನು ಯಾವುದೇ ಕಾರಣಕ್ಕೂ ಸಾಮಾನ್ಯ ವರ್ಗಕ್ಕೆ ಮಾರ್ಗಪಲ್ಲಟ ಮಾಡಿ ಕಾಮಗಾರಿಗಳನ್ನು ಕೈಗೊಳ್ಳುವಂತಿಲ್ಲ. ಎಸ್.ಸಿ.ಪಿ. & ಟಿ.ಎಸ್.ಪಿ ಯೋಜನೆಯಡಿ ಸಾಧಿಸಿದ ಆರ್ಥಿಕ ಮತ್ತು ಭೌತಿಕ ಪ್ರಗತಿಯ ವಿವರವಾದ ವರದಿಯನ್ನು ಪ್ರತ್ಯೇಕವಾಗಿ ಪ್ರತಿ ಮಾಹೆ ಸರ್ಕಾರಕ್ಕೆ ಸಲ್ಲಿಸುವುದು.

7. ಗ್ರಾಮ ಪಂಚಾಯತಿಗಳು ಕಾಮಗಾರಿಗಳ ಬಿಲ್ಲುಗಳ ಹಣವನ್ನು ಪಾವತಿಸುವಾಗ ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳು ಪ್ರಗತಿಯ ಎಲ್ಲಾ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಿದ ನಂತರವೇ ಬಿಲ್ಲುಗಳ ಪಾವತಿಗೆ ಕ್ರಮ ವಹಿಸುವುದು.

8. ಗ್ರಾಮ ಪಂಚಾಯತಿಗಳು ಪೂರ್ಣಗೊಂಡ ಕಾಮಗಾರಿಗಳ ಹಣವನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಗೆ ಬ್ಯಾಂಕ್ ಚೆಕ್ ಮೂಲಕ ಮಾತ್ರವೇ ಕಡ್ಡಾಯವಾಗಿ ಕೂಡಲೇ ಪಾವತಿಸತಕ್ಕದ್ದು. ಯಾವುದೇ ಸಂದರ್ಭದಲ್ಲಿಯೂ ನಗದುರೂಪದಲ್ಲಿ ಹಣ ಪಾವತಿಗೆ ಅವಕಾಶವಿರುವುದಿಲ್ಲ.

9. ಕಾಮಗಾರಿ ಪೂರ್ಣಗೊಂಡ ನಂತರ ಗ್ರಾಮ ವಿಕಾಸ ಯೋಜನೆಯಡಿ ಅನುದಾನ ಲಭ್ಯವಿದ್ದರೂ ಸಹ ಅನುಷ್ಟಾನ ಸಂಸ್ಥೆಗಳಿಗೆ ಹಣ ಪಾವತಿಮಾಡಲು ಗ್ರಾಮ ಪಂಚಾಯತಿಗಳು ವಿಳಂಬ ನೀತಿ ಅನುಸರಿಸಿದಲ್ಲಿ ವಿಳಂಬಕ್ಕೆ ಕಾರಣರಾದವರ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದು.

10. ಮುಖ್ಯ ಇಂಜಿನಿಯರ್, ಪಿಆರ್ಇಡಿ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಕೆಆರ್ಐಡಿಎಲ್ ರವರು ಗ್ರಾಮ ವಿಕಾಸ ಯೋಜನೆಯ ಎಲ್ಲಾ ಅನುಮೋದಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು.

11. ಅನುಷ್ಠಾನಾಧಿಕಾರಿಗಳು ಆರ್ಥಿಕ ಮತ್ತು ಭೌತಿಕ ಪ್ರಗತಿಯ ವಿವರವಾದ ವರದಿಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳಿಗೆ, ಮುಖ್ಯ ಇಂಜಿನಿಯರ್, ಪಿಆರ್ಇಡಿ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಕೆಆರ್ಐಡಿಎಲ್ ಇವರುಗಳಿಗೆ ಪ್ರತಿ ಮಾಹೆ ಸಲ್ಲಿಸುವುದು.

12. ಮುಖ್ಯ ಇಂಜಿನಿಯರ್, ಪಿಆರ್ಇಡಿ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಕೆಆರ್ಐಡಿಎಲ್ ರವರು ಕಾರ್ಯಪಾಲಕ ಅಭಿಯಂತರರು, ಪಿಆರ್ಇಡಿ / ಉಪ ನಿರ್ದೇಶಕರು, ಕೆಆರ್ಐಡಿಎಲ್ ಇವರುಗಳಿಂದ ಕಾಮಗಾರಿಗಳ ಪ್ರಗತಿಯ ವರದಿಗಳನ್ನು ಪಡೆದು ಸರ್ಕಾರಕ್ಕೆ ಕಾಲಕಾಲಕ್ಕೆ ನಿಗಧಿತ ನಮೂನೆಯಲ್ಲಿ ಸಲ್ಲಿಸುವುದು.

13. ಅನುಷ್ಠಾನಾಧಿಕಾರಿಗಳು ಹಣ ಬಳಕೆಯ ಉಪಯುಕ್ತತಾ ಪತ್ರವನ್ನು ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರುಗಳಿಗೆ ವಿಳಂಬಕ್ಕೆ ಅವಕಾಶವಿಲ್ಲದಂತೆ ಸಲ್ಲಿಸುವುದು.

14. ಈ ಆದೇಶವನ್ನು ಇಲಾಖಾ ವೆಬ್‌ಸೈಟ್ http://rdpr.kar.nic.in/ ನಲ್ಲಿ ಮಾಹಿತಿಗಾಗಿ ಅಪ್‌ಲೋಡ್ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ.ಬೂವನಹಳ್ಳಿನಾಗರಾಜ್)
ನಿರ್ದೇಶಕರು
ಹಾಗೂ ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ ವಿಧಾನ ಸೌಧ
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌದ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಹಾವೇರಿ ಮತ್ತು ಮೈಸೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಹಾವೇರಿ ಮತ್ತು ಮೈಸೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
12. ಜಿಲ್ಲಾ ಖಜಾನಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಹಾವೇರಿ ಮತ್ತು ಮೈಸೂರು.
13. ಮುಖ್ಯ ಇಂಜನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.
14. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
15. ಮುಖ್ಯಸ್ಥರು, ಗಣಕಕೋಶ / ವೆಬ್‌ಸೈಟ್ ನಲ್ಲಿ ಅಳವಡಿಸಲು.
16. ಸಂಪಾದಕರು, ಕರ್ನಾಟಕ ವಿಕಾಸ.
17. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

# ಅನುಬಂಧ

ಗ್ರಾಮ ವಿಕಾಸ ಯೋಜನೆಯಡಿ ಹೆಚ್ಚುವರಿಯಾಗಿ ಸೇರ್ಪಡೆಗೊಂಡ ಕೆಳಕಂಡ 6 ಗ್ರಾಮಗಳಿಗೆ 2017-18ನೇ ಸಾಲಿನಲ್ಲಿ ಬಿಡುಗಡೆಗೊಳಿಸಿದ 1 ನೇ ಕಂತಿನ ಅನುದಾನದ ವಿವರ

ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:11:ಗ್ರಾವಿಯೋ:2017, ಬೆಂಗಳೂರು,
ದಿನಾಂಕ : 17.05.2017.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಜಿಲ್ಲೆ | ವಿಧಾನ ಸಭಾಕ್ಷೇತ್ರ | ಗ್ರಾಮಗಳ ಹೆಸರು | | ಎಸ್.ಸಿ.ಪಿ | ಟಿ.ಎಸ್.ಪಿ | ಇತರೆ | ಒಟ್ಟು ಅನುದಾನ |
|---|---|---|---|---|---|---|---|---|
| 1 | ಚಿತ್ರದುರ್ಗ | ಮೊಳಕಾಲ್ಮೂರು | 1 | ನಾಗಸಮುದ್ರ | 10.87 | 5.25 | 21.38 | 37.50 |
| | | | 2 | ರಾಂಪುರ | 10.87 | 5.25 | 21.38 | 37.50 |
| | | | 3 | ಬೊಮ್ಮ ದೇವರಹಳ್ಳಿ | 10.87 | 5.25 | 21.38 | 37.50 |
| 2 | ಹಾವೇರಿ | ರಾಣೆಬೆನ್ನೂರು | 1 | ಕಾಕೊಳ | 10.87 | 5.25 | 21.38 | 37.50 |
| 3 | ಮೈಸೂರು | ಕೆ.ಆರ್.ನಗರ | 1 | ಬ್ಯಾಡರಹಳ್ಳಿ | 10.87 | 5.25 | 21.38 | 37.50 |
| | | | 2 | ಸಿದ್ದನಕೊಪ್ಪಲು | 10.87 | 5.25 | 21.38 | 37.50 |

(ಡಾ.ಬೂವನಹಳ್ಳಿನಾಗರಾಜ್)
ನಿರ್ದೇಶಕರು
ಹಾಗೂ ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ